# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:20.03.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ಎ. ಬಿ. ದೊಡ್ಡಯ್ಯ, (ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಎ. ಬಿ. ದೊಡ್ಡಯ್ಯ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಎನ್. ಜಿ. ಉಮೇಶ್ | ಸಹಾಯಕ ಅಭಿಯಂತರರು |
| 3 | ಡಾ॥ ಚೇತನ್ | ವೈದ್ಯಾಧಿಕಾರಿಗಳು |
| 4 | ಶ್ರೀ ರಮೇಶ್ | ಹಿ. ಆ. ಪ. |
| 5 | ಶ್ರೀ ಸೋಮಶೇಖರ್ ಎಸ್. | ಕಿ. ಆ. ಪ. |
| 6 | ಶ್ರೀ ರಾಜಶೇಖರ್ | ಬೆಸ್ಕಾಂ |
| 7 | ಶ್ರೀ ರಂಗರಾಜು | ಬೆಸ್ಕಾಂ |
| 8 | ಶ್ರೀ ಅವಿನಾಶ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 9 | ಶ್ರೀ ಆಶೀರ್ವಾದ | 17/ಬಿ, ಮೇಲ್ವಿಚಾರಕರು |
| 10 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು |
| 11 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು |
| 12 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು |
| 13 | ಶ್ರೀ ಮುರಳಿ | ಮೇಲ್ವಿಚಾರಕರು |
| 14 | ನಾಗೇಗೌಡ | ಮೇಲ್ವಿಚಾರಕರು |
| 15 | ಅಲಸ್ಟರ್ | ಮೇಲ್ವಿಚಾರಕರು |
| 16 | ರಾಜು | ಮಾರ್ಷಲ್ |
| 17 | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ವಿದ್ಯಾ ಇಲಾಖೆ:**

ಬಿಬಿಎಂಪಿ ಬಾಲಕಿಯರ ಪ್ರೌಢಶಾಲೆ, 12ನೇ ಮುಖ್ಯರಸೆ, ಗೋಕುಲ ಇಲ್ಲಿ ಹೊಸದಾಗಿ ಹಾಕಿರುವ ಬೋರ್‌ವೆಲ್ ಕೊರೆದು ಸರಿ ಸುಮಾರು 04 ತಿಂಗಳುಗಳಾಗಿದ್ದು, ಇದುವರೆಗೂ ಅದಕ್ಕೆ ಪಂಪ್‌ಸೆಟ್‌ನ್ನು ಅಳವಡಿಸಿರುವುದಿಲ್ಲ. ಆದ್ದರಿಂದ ಶಾಲೆಯ ದಿನೋಪಯೋಗಿ ಕೆಲಸಗಳಿಗೆ ಹಾಗೂ ಶೌಚಾಲಯಗಳಿಗೆ ನೀರಿನ ಅಭಾವ ಉಂಟಾಗುತ್ತಿದ್ದು, ಕೂಡಲೇ ಬೋರ್‌ವೆಲ್‌ಗೆ ಪಂಪ್‌ಸೆಟ್‌ನ್ನು ಅಳವಡಿಸಿಕೊಡಬೇಕೆಂದು ಅಧ್ಯಕ್ಷರು

Scanned with CamScanner

ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಅವರುಗಳು 2021ರ ಏಪ್ರಿಲ್-05ರಿಂದ 10ರ ರೊಳಗೆ ಅಳವಡಿಸಿಕೊಡುವುದಾಗಿ ಅಧ್ಯಕ್ಷರಿಗೆ ತಿಳಿಸಿದರು.

**2) ಕಟ್ಟಡದ ಭಗ್ನಾವಶೇಷಗಳು ಹಾಗೂ ಮಣ್ಣನ್ನು (Debris) ತೆರವುಗೊಳಿಸುವ ಬಗ್ಗೆ:-**

ವಾರ್ಡ್‌ನ ಜೋಡಿ ರಸ್ತೆ 6ನೇ ಅಡ್ಡರಸ್ತೆ, ಎಸ್.ಬಿ.ಎಂ. ಕಾಲೋನಿಯ ಕೆಲವೊಂದು ಕಡೆಗಳಲ್ಲಿ ಕಟ್ಟಡದ ಭಗ್ನಾವಶೇಷಗಳು (Debris) ಇರುವುದು ಕಂಡುಬಂದಿದ್ದು, ಹಾಗೂ ಗೋಕುಲ ಮೇಲ್ಸೇತುವೆ ಮೇಲೆ ಕೆಲವೊಂದು ಕಡೆಗಳಲ್ಲಿ ಮಣ್ಣು ಬಿದ್ದಿದ್ದು, ವಾಹನಗಳು ಸಂಚರಿಸಲು ತೊಂದರೆಯಾಗುತ್ತಿದ್ದು, ಅವುಗಳನ್ನು ತೆರವುಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲು ಅಧ್ಯಕ್ಷರು ಸಂಬಂಧಪಟ್ಟ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿರುತ್ತಾರೆ.

**3) ಘನತ್ಯಾಜ್ಯ ನಿರ್ವಹಣೆ :**

ವಾರ್ಡ್-17ರಲ್ಲಿ ಪ್ರಸ್ತುತ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರಿಗೆ ಹಾಗೂ ಕಸದ ಆಟೋ ಚಾಲಕರಿಗೆ ಮುಖಗವಸು, ಕೈಗವಸು ಮತ್ತು ಪೊರಕೆಗಳನ್ನು ಒದಗಿಸುತ್ತಿಲ್ಲವೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಸಭೆಯಲ್ಲಿ ತಿಳಿಸಿರುತ್ತಾರೆ. ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಸೂಕ್ತ ಕ್ರಮಕೈಗೊಳ್ಳಲು ಸೂಚಿಸುತ್ತೇನೆಂದು ಸಭೆಗೆ ತಿಳಿಸಿದರು.

ಪ್ರಸ್ತುತ ವಾರ್ಡ್‌ನಲ್ಲಿ ಪ್ರತಿದಿನ ಸಂಗ್ರಹಿಸುವ ಕಸವನ್ನು ಸಾಗಿಸಲು ಎರಡು ಕಾಂಪ್ಯಾಕ್ಟರ್‌ಗಳಿದ್ದು, ವಾರ್ಡ್‌ನಲ್ಲಿ ಪ್ರಸ್ತುತ ದಿನಗಳಲ್ಲಿ ಒಣಕಸವು ಜಾಸ್ತಿ ಸಂಗ್ರಹಣೆಯಾಗುತ್ತಿದ್ದು ಹಾಗೂ ವಾರ್ಡ್ ಜನಸಂಖ್ಯೆಗನುಗುಣವಾಗಿ ಹೆಚ್ಚುವರಿಯಾಗಿ 01 ಕಾಂಪ್ಯಾಕ್ಟರ್ ಅವಶ್ಯಕತೆಯಿರುತ್ತದೆ. ಆದ್ದರಿಂದ ತಾವುಗಳು ಪರ್ಯಾಯ ದಿನಗಳಲ್ಲಿ ಒಂದರಂತೆ ಕಾಂಪ್ಯಾಕ್ಟರ್‌ನ್ನು ಒದಗಿಸಿಕೊಡಬೇಕೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಮನವಿ ಮಾಡಿದರು. ಇದರ ಬಗ್ಗೆ ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟವರಲ್ಲಿ ಚರ್ಚಿಸಿ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

**4) ಕಾಮಗಾರಿ ಇಲಾಖೆ:**

ವಾರ್ಡ್‌ನಲ್ಲಿ ಕೆಲವೊಂದು ರಸ್ತೆಗಳಲ್ಲಿ ರಸ್ತೆಗುಂಡಿಗಳು ಕಂಡುಬಂದಿದ್ದು, ವಾಹನ ಸವಾರರಿಗೆ ತೊಂದರೆಯಾಗುತ್ತಿದೆಯೆಂದು ಸಾರ್ವಜನಿಕರು ಸಭೆಗೆ ದೂರು ನೀಡಿರುತ್ತಾರೆ. ಈ ಸಂಬಂಧ ಅಧ್ಯಕ್ಷರು ಮಾತನಾಡಿ, ಸಂಬಂಧಪಟ್ಟ ವಾರ್ಡ್ ಸಹಾಯಕ ಅಭಿಯಂತರರಿಗೆ ರಸ್ತೆಗುಂಡಿಗಳನ್ನು ಮುಚ್ಚಲು ತುರ್ತಾಗಿ ಕ್ರಮಕೈಗೊಳ್ಳಲು ಸೂಚಿಸಿದರು.

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಮೋಹನಕುಮಾರ್‌ನಗರ 3ನೇ ಅಡ್ಡರಸ್ತೆಗಳಲ್ಲಿ ರಸ್ತೆಯ ಎರಡೂ ಬದಿಗಳಲ್ಲಿರುವ ಚರಂಡಿಗಳಲ್ಲಿ ಹೂಳು ತುಂಬಿಕೊಂಡಿದ್ದು, ಮಳೆಗಾಲದಲ್ಲಿ ತೊಂದರೆಯಾಗುವ ಸಂಭವವಿರುತ್ತದೆ ಎಂದು ದೂರು ನೀಡಿರುತ್ತಾರೆ. ಪ್ರಸ್ತುತ ಮೋಹನಕುಮಾರನಗರದಲ್ಲಿ ಚರಂಡಿಯ ಹೂಳು ತೆಗೆಯುವ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಎಂದು ಸಹಾಯಕ ಅಭಿಯಂತರರು ಅಧ್ಯಕ್ಷರಿಗೆ ತಿಳಿಸಿದರು.

Scanned with CamScanner

**೨) ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ರಾಜ್ಯ ಅಕ್ಕಪಕ್ಕದ ರಾಜ್ಯಗಳಾದ ಮಹಾರಾಷ್ಟ್ರ ಹಾಗೂ ಆಂಧ್ರಪ್ರದೇಶದಲ್ಲಿ ಕೊರೋನಾ 2ನೇ ಅಲೆ ಆರಂಭಗೊಂಡಿದ್ದು, ಆದ್ದರಿಂದ ರಾಜ್ಯದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಸಾರ್ವಜನಿಕರು ತಪ್ಪದೇ ಮಾಸ್ಕ್ ಧರಿಸಲು ಅಧ್ಯಕ್ಷರು ತಿಳಿಸಿದರು. ಒಂದು ವೇಳೆ ಮಾಸ್ಕ್ ಹಾಕದಿರುವ ವ್ಯಕ್ತಿಗಳು ಕಂಡುಬಂದಲ್ಲಿ ಅಂತಹವರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಸೂಚಿಸಲಾಯಿತು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಎಸ್. ಹೆಚ್. ಉಮೇಶ್)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ವಿ. ಟಿ. ದೊಡ್ಡಯ್ಯ) 26/03/2021
ಮುಖ್ಯ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner